# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 10 (22)
ಮಾನ್ಯ ಸದಸ್ಯರ ಹೆಸರು : ಶ್ರೀ ಬಸನಗೌಡ ಬಾದರ್ಲಿ
ಉತ್ತರಿಸುವ ದಿನಾಂಕ : 17-08-2026
ಉತ್ತರಿಸುವ ಸಚಿವರು : ಸಮಾಜ ಕಲ್ಯಾಣ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಸಿಂಧನೂರು ತಾಲ್ಲೂಕಿನಲ್ಲಿ ಒಟ್ಟು 05 ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು ಕರ್ತವ್ಯ ನಿರ್ವಹಿಸುತ್ತಿದ್ದು, ಮಂಜೂರಾದ ಸಂಖ್ಯೆಗಿಂತ ಹೆಚ್ಚಿನ ವಿದ್ಯಾರ್ಥಿಗಳು ಪ್ರವೇಶಾತಿ ಪಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ರಾಯಚೂರು ಜಿಲ್ಲೆ ಸಿಂಧನೂರು ತಾಲ್ಲೂಕಿನಲ್ಲಿ 03 ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿನಿಲಯಗಳು ಹಾಗೂ 02 ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯಗಳು ಸೇರಿ ಒಟ್ಟು 05 ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿವೆ.<br><br>ರಾಯಚೂರು ಜಿಲ್ಲೆ ಸಿಂಧನೂರು ತಾಲ್ಲೂಕಿನ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿನ ವಿದ್ಯಾರ್ಥಿಗಳ ಪ್ರವೇಶಾತಿ ವಿವರಗಳು ಅನುಬಂಧ-1 ರಲ್ಲಿ ನೀಡಿದೆ. |
| ಆ) | ಒಂದು ಹಾಸ್ಟೆಲ್‌ನ ಮಂಜೂರಾತಿ ಸಾಮರ್ಥ್ಯ 100 ವಿದ್ಯಾರ್ಥಿಗಳು ಮಾತ್ರ ಆಗಿದ್ದು, ಅದಕ್ಕಿಂತ ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ಪ್ರವೇಶಾತಿ ಪಡೆದಲ್ಲಿ ವಿದ್ಯಾರ್ಥಿಗಳಿಗೆ ಸಮರ್ಪಕವಾಗಿ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಕಷ್ಟ ಸಾಧ್ಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; | ಸರ್ಕಾರದ ಸುತ್ತೋಲೆ ಸಂಖ್ಯೆ: ಸಕಇ 87 ಸಮನ್ವಯ 2013 ದಿನಾಂಕ:20-07-2013 ರನ್ವಯ ಇಲಾಖೆಯ ವಿದ್ಯಾರ್ಥಿನಿಲಯಗಳಿಗೆ ಪ್ರವೇಶ ಕೋರಿ ಅರ್ಜಿ ಸಲ್ಲಿಸುವ ಎಲ್ಲಾ ಅರ್ಹ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿನಿಲಯದಲ್ಲಿ ಪ್ರವೇಶ ಕಲ್ಪಿಸಲಾಗುತ್ತಿದೆ.<br><br>ಇಲಾಖೆಯ ವಿದ್ಯಾರ್ಥಿನಿಲಯಗಳಲ್ಲಿ ಮಂಜೂರಾತಿ ಸಂಖ್ಯೆಗಿಂತ ಹೆಚ್ಚಿನ ಸಂಖ್ಯೆಯಲ್ಲಿ ಅರ್ಜಿಗಳು ಸ್ವೀಕೃತವಾದಲ್ಲಿ ವಿದ್ಯಾರ್ಥಿನಿಲಯಗಳ ಕಟ್ಟಡದ ಗರಿಷ್ಠ ಸಾಮರ್ಥ್ಯಾನುಸಾರ ಪ್ರವೇಶಾವಕಾಶ ಕಲ್ಪಿಸಲಾಗುತ್ತಿದೆ. ಅದಾಗ್ಯೂ ಹೆಚ್ಚಿನ ಅರ್ಜಿಗಳು ಸ್ವೀಕೃತವಾದಲ್ಲಿ ಹೆಚ್ಚುವರಿ ಬಾಡಿಗೆ ಕಟ್ಟಡ ಪಡೆದು ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶ ಕಲ್ಪಿಸಲು ಕ್ರಮವಹಿಸಲಾಗುತ್ತಿದೆ. |

| | | |
|---|---|---|
| ಇ) | ಬಂದಿದ್ದಲ್ಲಿ, ಈ ಸಂಬಂಧ ಜಿಲ್ಲಾ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ರಾಯಚೂರು ಇವರಿಂದ ವರದಿ ಪಡೆದು ಪ್ರವೇಶಾತಿ ಪಡೆಯುವ ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಅಗತ್ಯವಿರುವ ಹೆಚ್ಚುವರಿ ವಿದ್ಯಾರ್ಥಿನಿಲಯಗಳನ್ನು ಮಂಜೂರು ಮಾಡುವ ಸಂಬಂಧ ಸರ್ಕಾರದ ನಿಲುವೇನು; | 2026-27ನೇ ಸಾಲಿನ ಆಯವ್ಯಯ ಘೋಷಣೆಯ ಕಂಡಿಕೆ-182 ರಂತೆ ಪ್ರತಿ ಜಿಲ್ಲೆಗೆ 01 ರಂತೆ ತಲಾ 150 ಸಂಖ್ಯಾಬಲದ ಒಂದು ಬಾಲಕಿಯರ ಮತ್ತು ಒಂದು ಬಾಲಕರ ಒಟ್ಟು 62 ಹೊಸ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳನ್ನು ಪ್ರಾರಂಭಿಸಲು ಆದೇಶ ಹೊರಡಿಸಲಾಗಿದೆ. |
| ಈ) | ಸಿಂಧನೂರು ತಾಲ್ಲೂಕಿಗೆ ಅಗತ್ಯವಿರುವ ಹೆಚ್ಚುವರಿ ವಿದ್ಯಾರ್ಥಿನಿಲಯಗಳನ್ನು ನಿರ್ಮಿಸಲು ಸರ್ಕಾರದಿಂದ ಯಾವ ಕಾಲಮಿತಿಯೊಳಗೆ ಮಂಜೂರಾತಿ ನೀಡಲಾಗುವುದು? | |

**ಸಕಇ 751 ಪಕವಿ 2026**

(ಕೆ.ಹೆಚ್.ಮುನಿಯಪ್ಪ)
**ಸಮಾಜ ಕಲ್ಯಾಣ ಸಚಿವರು**

## ಅನುಬಂಧ-1

| ರಾಯಚೂರು ಜಿಲ್ಲೆ, ಸಿಂಧನೂರು ತಾಲ್ಲೂಕಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ವಿವರಗಳು | | | | | | |
|---|---|---|---|---|---|---|
| ಕ್ರ ಸಂ | ತಾಲ್ಲೂಕು | ವಿದ್ಯಾರ್ಥಿ ನಿಲಯದ ಹೆಸರು | ವಿದ್ಯಾರ್ಥಿಗಳ ಸಂಖ್ಯೆ | | | |
| | | | ಮಂಜೂರಾತಿ ಸಂಖ್ಯೆ | ಹೆಚ್ಚುವರಿ ಅನುಮತಿಸಲಾದ ಸಂಖ್ಯೆ | ಒಟ್ಟು (Permissible strength) | ನಿಲಯದ ದಾಖಲಾತಿ ಸಂಖ್ಯೆ |
| 1 | ಸಿಂಧನೂರು | ಡಾ.ಬಿ.ಆರ್ ಅಂಬೇಡ್ಕರ್ ಮೆಟ್ರಿಕ್ ನಂತರದ ಡಿಗ್ರಿ ಬಾಲಕರ ವಿದ್ಯಾರ್ಥಿನಿಲಯ, ಸಿಂಧನೂರು. | 100 | 175 | 275 | 232 |
| 2 | | ಡಾ.ಬಿ.ಆರ್ ಅಂಬೇಡ್ಕರ್ ಮೆಟ್ರಿಕ್ ನಂತರದ ಡಿಗ್ರಿ ಬಾಲಕರ ವಿದ್ಯಾರ್ಥಿನಿಲಯ, ಸಿಂಧನೂರು. | 200 | 262 | 462 | 218 |
| 3 | | ಡಾ.ಬಿ.ಆರ್ ಅಂಬೇಡ್ಕರ್ ಮೆಟ್ರಿಕ್ ನಂತರದ ಪಿಯು ಬಾಲಕರ ವಿದ್ಯಾರ್ಥಿನಿಲಯ, ಸಿಂಧನೂರು. | 100 | 197 | 297 | 280 |
| 4 | | ಡಾ.ಬಿ.ಆರ್ ಅಂಬೇಡ್ಕರ್ ಮೆಟ್ರಿಕ್ ನಂತರದ ಡಿಗ್ರಿ ಬಾಲಕಿಯರ ವಿದ್ಯಾರ್ಥಿನಿಲಯ, ಸಿಂಧನೂರು | 100 | 361 | 461 | 391 |
| 5 | | ಡಾ.ಬಿ.ಆರ್ ಅಂಬೇಡ್ಕರ್ ಮೆಟ್ರಿಕ್ ನಂತರದ ಡಿಗ್ರಿ ಬಾಲಕಿಯರ ವಿದ್ಯಾರ್ಥಿನಿಲಯ, ಸಿಂಧನೂರು | 100 | 307 | 407 | 407 |
| **ಒಟ್ಟು** | | | **600** | **1302** | **1902** | **1528** |